ಕರ್ನಾಟಕ ಸರಕಾರ

# ಜಿಲ್ಲಾಧಿಕಾರಿಗಳ ಕಾರ್ಯಾಲಯ ರಾಯಚೂರು ಜಿಲ್ಲೆ ರಾಯಚೂರು

## 2019 ನೇ ಸಾಲಿಗಾಗಿ

## ಗ್ರಾಮಲೆಕ್ಕಿಗರ ನೇರ ನೇಮಕಾತಿ ಆಯ್ಕೆ ಪ್ರಾಧಿಕಾರ

ಹಾಗೂ

ಜಿಲ್ಲಾಧಿಕಾರಿಗಳು

ರಾಯಚೂರು ಜಿಲ್ಲೆ, ರಾಯಚೂರು

ಕರ್ನಾಟಕ ಸರ್ವಜನಿಕ ಉದ್ಯೋಗ (ಹೈದ್ರಾಬಾದ ಕರ್ನಾಟಕ ಪ್ರದೇಶಕ್ಕೆ

ನೇಮಕಾತಿಯಲ್ಲಿ ಮೀಸಲಾತಿ) ಆದೇಶ 2013 ರಂತೆ

ಸಂವಿಧಾನದ ಅನುಚ್ಛೇದ 371 (ಜೆ) ಸ್ಥಳಿಯ ವೃಂದ

ಮತ್ತು

ಸ್ಥಳೀಯೇತರ ವೃಂದದ ಗ್ರಾಮಲೆಕ್ಕಿಗರ ಹುದ್ದೆಯ ನೇರ ನೇಮಕಾತಿ ಸಂಬಂಧ

## ಮಾಹಿತಿ ಸೂಚಿ - 2019

## ರಾಯಚೂರು ಜಿಲ್ಲೆಯ ಗ್ರಾಮಲೆಕ್ಕಿಗರ ನೇರ ನೇಮಕಾತಿಗೆ ಸಂಬಂಧಿಸಿದಂತೆ ವೇಳಾ ಪಟ್ಟಿ

| ಕ್ರ.ಸಂ | ವಿವರ | ದಿನಾಂಕ |
|---|---|---|
| 1 | ಅಧಿಸೂಚನೆ ಹೊರಡಿಸಿದ ದಿನಾಂಕ | 19-01-2019 |
| 2 | ಅರ್ಜಿ ಕರೆಯಲು ನಿಗದಿಪಡಿಸಿದ ದಿನಾಂಕ | 23-01-2019 |
| 3 | ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 22-2-2019 |
| 4 | ಮೂಲ ದಾಖಲೆಗಳನ್ನು ಪರಿಶೀಲನೆಗಾಗಿ ಅರ್ಹ ಅಭ್ಯರ್ಥಿಗಳ ಪರಿಶೀಲನಾ ಪಟ್ಟಿ ಪ್ರಚುರ ಪಡಿಸಬೇಕಾದ ದಿನಾಂಕ | 25-2-2019 |
| 5 | ಅಭ್ಯರ್ಥಿಗಳು ಮೂಲ ದಾಖಲೆಗಳೊಂದಿಗೆ ಪರಿಶೀಲನೆಗಾಗಿ ಜಿಲ್ಲಾಧಿಕಾರಿಗಳ ಕಛೇರಿಗೆ ಹಾಜರಾಗಬೇಕಾದ ದಿನಾಂಕ ಮತ್ತು ಸಮಯ | 27-02-2019<br>ಬೆಳಿಗ್ಗೆ 11-00 ಗಂಟೆಗೆ |
| 6 | ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಚುರ ಪಡಿಸಬೇಕಾದ ದಿನಾಂಕ | 1-3-2019 |
| 7 | ತಾತ್ಕಾಲಿಕ ಆಯ್ಕೆ ಪಟ್ಟಿಗೆ ಆಕ್ಷೇಪಣೆಗಳನ್ನು ಸಲ್ಲಿಸಲು ಕೊನೆಯ ದಿನಾಂಕ | 8-3-2019 |
| 8 | ಜಿಲ್ಲಾಧಿಕಾರಿಗಳ ಕಛೇರಿಯು ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸಬೇಕಾದ ದಿನಾಂಕ | 12-03-2019 |
| 9 | ವೆಬ್ ಸೈಟ್ ವಿಳಾಸ | http://raichur-va.kar.nic.in |
| 10 | ಸ್ಪಷ್ಟೀಕರಣ/ಮಾಹಿತಿಗಾಗಿ ಸಂಪರ್ಕಿಸಬಹುದಾದ ಹೆಲ್ಪ್ ಲೈನ್ (ಕಛೇರಿ ವೇಳೆಯಲ್ಲಿ ) | 08532-226383 |

(ಶರತ್ .ಬಿ) ಭಾ.ಆ.ಸೇ

ಅಧ್ಯಕ್ಷರು
ಗ್ರಾಮಲೆಕ್ಕಿಗರ ನೇರ ನೇಮಕಾತಿ
ಆಯ್ಕೆ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿಗಳು
ರಾಯಚೂರು

ಕಂದಾಯ ಇಲಾಖೆ

## ಜಿಲ್ಲಾಧಿಕಾರಿಗಳ ಕಾರ್ಯಾಲಯ ರಾಯಚೂರು

## ಗ್ರಾಮಲೆಕ್ಕಿಗರ ನೇರ ನೇಮಕಾತಿ ಆಯ್ಕೆ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿಗಳು ರಾಯಚೂರು

ಸಂಖ್ಯೆ: ಕಂದಾಯ/ಸಿಬ್ಬಂದಿ-1/ಗ್ರಾ.ನೇ.ನೇ/18714/2018-19 ದಿನಾಂಕ:19-1-2019

### ಅಧಿಸೂಚನೆ

ಕರ್ನಾಟಕ ಸರ್ಕಾರದ ಕಂದಾಯ ಇಲಾಖೆಯ ರಾಯಚೂರು ಜಿಲ್ಲೆಯ ಕಂದಾಯ ಘಟಕದಲ್ಲಿ ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದ್ರಾಬಾದ್- ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ಆದೇಶ 2013 ರಡಿಯಲ್ಲಿ ಹೈದ್ರಾಬಾದ್-ಕರ್ನಾಟಕ ಪ್ರದೇಶದವರಿಗಾಗಿ ಮತ್ತು ಉಳಿದ ಪ್ರದೇಶದವರಿಗಾಗಿ ಹುದ್ದೆಗಳನ್ನು ಮೀಸಲಿರಿಸಲಾಗಿರುತ್ತದೆ.

2019 ನೇ ಸಾಲಿನಲ್ಲಿ ಹೈದ್ರಾಬಾದ-ಕರ್ನಾಟಕ ಪ್ರದೇಶದವರೆಗೆ ಸ್ಥಳೀಯ ವೃಂದದಲ್ಲಿ 41 ಹುದ್ದೆಗಳು ಮತ್ತು ಉಳಿದ ಮೂಲ ವೃಂದಲ್ಲಿ [ಸ್ಥಳಯೇತರ] 10 ಒಟ್ಟು {41+10} 41 ಗ್ರಾಮಲೆಕ್ಕಿಗರ ಹುದ್ದೆಗಳು ಖಾಲಿ ಇರುತ್ತವೆ.

ಸದರಿ ಗ್ರಾಮಲೆಕ್ಕಿಗರ ಹುದ್ದೆಗಳಿಗೆ ವರ್ಗೀಕರಣ ಮತ್ತು ಮೀಸಲಾತಿ ಅನ್ವಯ ಕರ್ನಾಟಕ ನಾಗರೀಕ ಸೇವೆಗಳು [ Revenue Subordinate Branch] [Cadre & Recruitment ] [Amendment] ನಿಯಮಗಳು 2008 ನಿಯಮ 2 ರನ್ವಯ ಮತ್ತು 2009 ರನ್ವಯ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಸರ್ಕಾರದ ಪತ್ರ ಸಂಖ್ಯೆ:ಕಂ.ಇ/04/ಬಿ.ಎಸ್.ಸಿ./2011 ದಿನಾಂಕ:25.02.2011 ಸರಕಾರದ ಪತ್ರ ಸಂಖ್ಯೆ ಸಿಆಸುಇ/91/ಹೈಕಕೋ/2014 ದಿನಾಂಕ 06/12/2014 ಮತ್ತು ಪತ್ರ ಸಂಖ್ಯೆ/ಕಂಇ/32/ಬಿಎಸ್‌ಐ/2015 ದಿನಾಂಕ 02/03/2015 ಮತ್ತು ಮಾನ್ಯ ಸರ್ಕಾರದ ಪತ್ರ ಸಂಖ್ಯೆ : ಸಿಆಸುಇ/82/ಹೈಕಕೋ/2018 ದಿನಾಂಕ 15-11-2018 ನಿರ್ದೇಶಿಸಲಾಗಿರುತ್ತದೆ.

ಪ್ರಯುಕ್ತ ಗ್ರಾಮಲೆಕ್ಕಿಗರ ಖಾಲಿ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ನಿರ್ಧರಿಸಿ ಅರ್ಹ ಅಭ್ಯರ್ಥಿಗಳಿಂದ ಪ್ರಾಧಿಕಾರವು ನಿಗದಿಪಡಿಸಿರುವ ನಮೂನೆಯಲ್ಲಿ ಅರ್ಜಿಗಳನ್ನು ಆನ್ ಲೈನ್ ಮೂಲಕ ಅಹ್ವಾನಿಸಲಾಗಿದೆ.

**2018-19 ಸಾಲಿನಲ್ಲಿ ಭರ್ತಿ ಮಾಡಲು ಉದ್ದೇಶಿಸಿರುವ ಗ್ರಾಮಲೆಕ್ಕಿಗರ ಹುದ್ದೆಗಳ ಸಂಖ್ಯೆ-51**

1} ಹೈದ್ರಾಬಾದ-ಕರ್ನಾಟಕ ಪ್ರದೇಶದವರೆಗೆ ಮೀಸಲಿರಿಸಿದ ಹುದ್ದೆಗಳ ಪೈಕಿ ಖಾಲಿ ಇರುವ ಹುದ್ದೆಗಳು [HK] **41**

2} ಇತರೆ ಪ್ರದೇಶದವರಿಗೆ ಮೀಸಲಿರಿಸಿದ ಹುದ್ದೆಗಳ ಪೈಕಿ ಖಾಲಿ ಇರುವ ಹುದ್ದೆಗಳು [NON HK ] - **10**

### {1 } ಸ್ಥಳೀಯ ವೃಂದ

2018-19 ನೇ ಸಾಲಿನಲ್ಲಿ ಸ್ಥಳೀಯ ವೃಂದದದಲ್ಲಿ (HK Local CADRE) ಗ್ರಾಮಲೆಕ್ಕಿಗರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು (1) ರಿಂದ (100) ರ ವರೆಗಿನ ರೋಷ್ಟರ್ ಬಿಂದುಗಳಲ್ಲಿ ಸೈಕಲ್ (1) ರ ರೋಷ್ಟರ್ ಬಿಂದು **(1)** ರಿಂದ ಆರಂಭಿಸಿ **(41)** ರ ವರೆಗೆ ಆಪರೇಟ್ ಮಾಡಿ ಒಟ್ಟು **(41)** ಹುದ್ದೆಗಳಿಗೆ ಉಪಯೋಗಿಸಿ ವರ್ಗೀಕರಿಸಿದೆ ರೋಷ್ಟರ್ ಬಿಂದುಗಳಿಗನುಗುಣವಾಗಿ ವರ್ಗೀಕರಣ ಈ ಕೆಳಗಿನಂತೆ ಇರುತ್ತದೆ

ಸ್ಥಳೀಯ ವೃಂದದಲ್ಲಿ ಹುದ್ದೆಗಳ ವರ್ಗೀಕರಣ ಒಟ್ಟು (41) ಹುದ್ದೆಗಳು ಆಯಾ ವರ್ಗಗಳಿಗನುಗುಣವಾಗಿ

| ಪ್ರ ವರ್ಗ | ಲಭ್ಯವಾಗುವ ಹುದ್ದೆಗಳು | ಸಾಮಾನ್ಯ | ಕನ್ನಡ ಮಾಧ್ಯಮ | ಮಹಿಳಾ ಅಭ್ಯರ್ಥಿ | ಯೋಜನಾ ನಿರಾಶ್ರಿತ | ಗ್ರಾಮೀಣ ಅಭ್ಯರ್ಥಿ | ಮಾಜಿ ಸೈನಿಕ | ಅಂಗವಿಕಲ ಅಭ್ಯರ್ಥಿ | ಒಟ್ಟು |
|---|---|---|---|---|---|---|---|---|---|
| | | ( O) | [KM] | W | (PDP) | (R) | (XMP) | (PH) | |
| ಪರಿಶಿಷ್ಟಜಾತಿ | 7 | 2 | 0 | 2 | 0 | 2 | 0 | 1 | 7 |
| ಪರಿಶಿಷ್ಟಪಂಗಡ | 2 | 1 | 0 | 1 | 0 | 0 | 0 | 0 | 2 |
| ಪ್ರ ವರ್ಗ I | 2 | 1 | 0 | 1 | 0 | 0 | 0 | 0 | 2 |
| ಪ್ರ ವರ್ಗ II A | 6 | 1 | O | 2 | 0 | 2 | 0 | 1 | 6 |
| ಪ್ರ ವರ್ಗ IIB | 2 | 1 | 0 | 1 | 0 | 0 | 0 | 0 | 2 |
| ಪ್ರ ವರ್ಗ III A | 1 | 1 | 0 | 0 | 0 | 0 | 0 | 0 | 1 |
| ಪ್ರ ವರ್ಗ IIIB | 1 | 1 | | 0 | 0 | 0 | 0 | 0 | 1 |
| ಸಾಮಾನ್ಯ ವರ್ಗ | 20 | 4 | 1 | 6 | 1 | 5 | 2 | 1 | 20 |
| Total | **41** | 12 | 1 | 13 | 1 | 9 | 2 | 3 | **41** |

**2) ಸ್ಥಳಿಯೇತರ ವೃಂದದಲ್ಲಿ (Non - HK ) 2018-19 ನೇ ಸಾಲಿನಲ್ಲಿ ಒಟ್ಟು ಖಾಲಿ ಇರುವ ಹುದ್ದೆಗಳು -10**

ಹಿಂದಿನ 2015-16 ಸಾಲಿನಲ್ಲಿ ಸ್ಥಳಿಯೇತರ ವೃಂದದ (Non-HK) ಗ್ರಾಮ ಲೆಕ್ಕಿಗರ ನೇರ ನೇಮಕಾತಿಯ ಸಮಯದಲ್ಲಿ (ಸೈಕಲ್ 3) ರ ರೋಸ್ಟರ್ ಬಿಂದು 36 ರಿಂದ ಆರಂಭಿಸಿ 59 ರ ವರೆಗೆ ವರ್ಗೀಕರಿಸಿ ಉಪಯೋಗಿಸಲಾಗಿರುತ್ತದೆ ಪ್ರಸ್ತುತ 2019 ರ ಸ್ಥಳಿಯೇತರ ವೃಂದದ (Non-HK) ಗ್ರಾಮ ಲೆಕ್ಕಿಗರ ನೇರನೇಮಕಾತಿಯ ಒಟ್ಟು (10 ) ಹುದ್ದೆಗಳನ್ನು ರೋಷ್ಟರ್ ಬಿಂದು (ಸೈಕಲ್-3 ರ) 60 ರಿಂದ ಮುಂದುವರೆಸಿ ರೋಷ್ಟರ್ ಬಿಂದು 69 ರ ವರೆಗೆ ಆಪರೇಟ್ ಮಾಡಿ ಒಟ್ಟು (10) ಹುದ್ದೆಗಳಿಗೆ ಉಪಯೋಗಿಸಿ ವರ್ಗೀಕರಿಸಿದೆ ರೋಷ್ಟರ್ ಬಿಂದುಗಳಿಗನುಗುಣವಾಗಿ ವರ್ಗೀಕರಣ ಈ ಕೆಳಗಿನಂತೆ ಇರುತ್ತದೆ

| ಪ್ರ ವರ್ಗ | ಲಭ್ಯವಾಗುವ ಹುದ್ದೆಗಳು | ಸಾಮಾನ್ಯ | ಕನ್ನಡ ಮಾಧ್ಯಮ | ಮಹಿಳಾ ಅಭ್ಯರ್ಥಿ | ಯೋಜನಾ ನಿರಾಶ್ರಿತ | ಗ್ರಾಮೀಣ ಅಭ್ಯರ್ಥಿ | ಮಾಜಿ ಸೈನಿಕ | ಅಂಗವಿಕಲ ಅಭ್ಯರ್ಥಿ | ಒಟ್ಟು |
|---|---|---|---|---|---|---|---|---|---|
| ಪರಿಶಿಷ್ಟಜಾತಿ | 1 | 1 | 0 | 0 | 0 | 0 | 0 | 0 | **1** |
| ಪರಿಶಿಷ್ಟಪಂಗಡ | 0 | 0 | 0 | 0 | 0 | 0 | 0 | 0 | **0** |
| ಪ್ರ ವರ್ಗ I | 0 | 0 | 0 | 0 | 0 | 0 | 0 | 0 | **0** |
| ಪ್ರ ವರ್ಗ II A | 2 | 1 | 0 | 0 | 0 | 0 | 1 | 0 | **2** |
| ಪ್ರ ವರ್ಗ IIB | 1 | 0 | 0 | 0 | 0 | 1 | 0 | 0 | **1** |
| ಪ್ರ ವರ್ಗ III A | 0 | 0 | 0 | 0 | 0 | 0 | 0 | 0 | **0** |
| ಪ್ರ ವರ್ಗ IIIB | 1 | 0 | 0 | 0 | 0 | 1 | 0 | 0 | **1** |
| ಸಾಮಾನ್ಯ ವರ್ಗ | 5 | 1 | 1 | 1 | 0 | 1 | 1 | 0 | **5** |
| Total | **10** | **3** | **1** | **1** | **0** | **3** | **2** | **0** | **10** |

**1.ಅರ್ಜಿ ಸಲ್ಲಿಸುವ ವಿಧಾನ-:** ಅರ್ಜಿಗಳನ್ನು ಆನ್-ಲೈನ್ [ On line ] [ಎಲೆಕ್ಟ್ರಾನಿಕ್ ಮಾರ್ಗ] ಮುಖಾಂತರ ಮಾತ್ರ ಸಲ್ಲಿಸತಕ್ಕದ್ದಾಗಿದೆ. ಅರ್ಜಿಗಳನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಪ್ರತ್ಯೇಕವಾಗಿ ಸಲ್ಲಿಸಲು ಅವಕಾಶವಿರುವುದಿಲ್ಲ.

**2.ಅರ್ಜಿ ಶುಲ್ಕ:-**

| | |
|---|---|
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಾಗೂ ಪ್ರ.ವರ್ಗ-1 | . **ರೂ. 150-00** |
| ಸಾಮಾನ್ಯ ವರ್ಗ, 2ಎ, 2ಬಿ, 3ಎ, 3ಬಿ ವರ್ಗಕ್ಕೆ | **ರೂ. 300-00** |

**3.ಆನ್-ಲೈನ್ [ On line ] [ಎಲೆಕ್ಟ್ರಾನಿಕ್ ಮಾರ್ಗ] ಮುಖಾಂತರ ಅರ್ಜಿ ಸಲ್ಲಿಸುವ ವಿಧಾನ:-**

ಅಭ್ಯರ್ಥಿಯು ಇಲಾಖೆಯ ಅಧಿಕೃತ ವೆಬ್ ಸೈಟ್ http://raichur-va.kar.nic.in ತೆರೆದು ಕಂಪ್ಯೂಟರ್ ಪರದೆಯ ಮೇಲೆ ಅರ್ಜಿಯನ್ನು ತುಂಬಬೇಕು ಹಾಗೂ ಇತ್ತೀಚಿನ ಭಾವ ಚಿತ್ರವನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡಬೇಕು. ನಂತರ ಅಭ್ಯರ್ಥಿಯು Submit Button ಅನ್ನು ಒತ್ತಿದರೆ ಅರ್ಜಿ ಸಂಖ್ಯೆ [ Reference Number] ಸೃಷ್ಟಿಯಾಗುತ್ತದೆ. ಆನ್-ಲೈನ್ ಅರ್ಜಿಯನ್ನು ಭರ್ತಿ ಮಾಡಿದ ನಂತರ ಅಭ್ಯರ್ಥಿಗಳು ಸ್ವೀಕೃತಿ ಪತ್ರ [ Acknowledgement Slip] ಮತ್ತು ದ್ವಿ ಪ್ರತಿ ಚಲನ್ ನ್ನು ತೆಗೆದುಕೊಳ್ಳತಕ್ಕದ್ದು. ಈ ಚಲನ್ ಅನ್ನು ಅರ್ಜಿ ಶುಲ್ಕದೊಂದಿಗೆ ಸ್ಟೇಟ್ ಬ್ಯಾಂಕ್ ಆಫ್ ಹೈದರಾಬಾದ್ ಮುಖ್ಯ ಶಾಖೆ ರಾಯಚೂರಿನಲ್ಲಿ ಜಮಾ ಆಗುವಂತೆ ಪಾವತಿಸಬೇಕು.

ಅಭ್ಯರ್ಥಿಗಳು ಸ್ವೀಕೃತಿ ಸ್ಲಿಪ್ ಅನ್ನು ಮತ್ತು ಚಲನ್ ಪಾವತಿಯ ಒಂದು ಪ್ರತಿಯನ್ನು ಕಡ್ಡಾಯವಾಗಿ ತಮ್ಮ ಬಳಿ ಇರಿಸಿಕೊಳ್ಳತಕ್ಕದ್ದು. ಇನ್ನೊಂದು ಚಲನ್ ಪ್ರತಿ ಬ್ಯಾಂಕ್ ಬಳಿ ಇರುತ್ತದೆ. ಈ ದಾಖಲೆಗಳನ್ನು ಪರಿಶೀಲನೆಗೆ ನಿಗದಿಪಡಿಸಿದ ದಿನಾಂಕದಂದು [**27-02-2019**] ಹಾಜರುಪಡಿಸತಕ್ಕದ್ದು. ಬ್ಯಾಂಕಿನಲ್ಲಿ ನಿಗದಿತ ಅರ್ಜಿ ಶುಲ್ಕ ಪಾವತಿಸಲು ಕೊನೆಯ ದಿನಾಂಕ: **22-02-2019** ಆಗಿರುತ್ತದೆ. ನಿಗದಿತ ಅರ್ಜಿ ಶುಲ್ಕ ಹೊರತುಪಡಿಸಿ ಯಾವುದೇ ವಿಧವಾದ ಬ್ಯಾಂಕ್ ಶುಲ್ಕ ಇತ್ಯಾದಿ ಪಾವತಿಸುವ ಅವಶ್ಯಕತೆ ಇರುವುದಿಲ್ಲ. ನಗದು/ಡಿ.ಡಿ./ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ಅಲ್ಲದೆ ಒಮ್ಮೆ ಅರ್ಜಿ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂದಿರುಗಿಸಲಾಗುವುದಿಲ್ಲ ಅಥವಾ ಅದನ್ನು ಇತರೆ ಯಾವುದೇ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ. ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ **22-02-2019** ರ ಒಳಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸತಕ್ಕದ್ದು.

1. ಅರ್ಜಿಗಳನ್ನು ದಿನಾಂಕ:**23-01-2019** ರಿಂದ **22-02-2019** ರ ಒಳಗಾಗಿ ಸಲ್ಲಿಸತಕ್ಕದ್ದು.
2. ಅರ್ಜಿ ಶುಲ್ಕವನ್ನು ದಿನಾಂಕ: **23-01-2019** ರಿಂದ **22-02-2019** ರ ವರೆಗೆ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಮುಖ್ಯ ಶಾಖೆ ರಾಯಚೂರು ಎಸ್.ಬಿ.ಖಾತೆ ಸಂಖ್ಯೆ:**62093492139 IFSC Code No: SBIN0020203 MICR Code No 584004002** ಇದಕ್ಕೆ ಬ್ಯಾಂಕ್ ವ್ಯವಹಾರದ ವೇಳೆಯಲ್ಲಿ ಪಾವತಿಸತಕ್ಕದ್ದು. ಹಾಗೂ ಶುಲ್ಕ ಪಾವತಿಸಿದ ನಂತರ ಆನ್‌ಲೈನ್ ಮೂಲಕ ತಂತ್ರಾಂಶದ ಸೂಚನೆಯನ್ನು ಪಾಲಿಸಿ ಸ್ಕ್ಯಾನ ಮಾಡಿದ ಚಲನ್ (ಬ್ಯಾಂಕಿನಲ್ಲಿ ಅರ್ಜಿ ಶುಲ್ಕ ಸಂದಾಯ ಮಾಡಿ ಬ್ಯಾಂಕ ಮೋಹರು ಹಾಕಲಾದ ಚಲನ್) ಅಪ್‌ಲೋಡ್ (Uploading Challan Option) ಮಾಡತಕ್ಕದ್ದು. ಇದು ಅಭ್ಯರ್ಥಿಯ ಜವಾಬ್ದಾರಿಯಾಗಿರುತ್ತದೆ. (ಅರ್ಜಿ ಶುಲ್ಕ ಪಾವತಿಸಿರುವ ಚಲನ್ ಅನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡುವುದು ಕಡ್ಡಾಯವಾಗಿದ್ದು, ಚಲನ್ ಅಪ್‌ಲೋಡ್ ಮಾಡದೇ ಇದ್ದಲ್ಲಿ ಅಂತಹ ಆನ್‌ಲೈನ್ ಅರ್ಜಿಯನ್ನು ತಿರಸ್ಕರಿಸಲಾಗುವುದು.

**1.ಅರ್ಹತಾ ಷರತ್ತುಗಳು:-**

ಅ] ಭಾರತೀಯ ನಾಗರೀಕನಾಗಿರತಕ್ಕದ್ದು.

ಆ] ಶೈಕ್ಷಣಿಕ ವಿದ್ಯಾರ್ಹತೆಯನ್ನು ಕರ್ನಾಟಕ ರಾಜ್ಯದಲ್ಲಿ ಪೂರೈಸಿರಬೇಕು.

ಇ] ಅಭ್ಯರ್ಥಿಗಳು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ/ಮಾನಸಿಕ ನ್ಯೂನತೆಯಿಂದ ಮುಕ್ತರಾಗಿರತಕ್ಕದ್ದು.

ಈ] ಅಭ್ಯರ್ಥಿಯು ಈ ಹಿಂದೆ ಯಾವುದೇ ಸರ್ಕಾರದ ಸೇವೆಯಿಂದ ವಜಾಗೊಂಡಿರಬಾರದು.

**2.ಶೈಕ್ಷಣಿಕ ವಿದ್ಯಾರ್ಹತೆ :-**

ಅ) PUC ಪರೀಕ್ಷೆ ಅಥವಾ CBSE ಅಥವಾ ICSE ನಡೆಸುವ 12 ನೇ ತರಗತಿ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರಬೇಕು. ಈ ವಿದ್ಯಾರ್ಹತೆಯನ್ನು ಅಧಿಸೂಚನೆ ಹೊರಡಿಸಿರುವ ದಿನಾಂಕಕ್ಕೆ ಮುಂಚಿತವಾಗಿ ಹೊಂದಿರತಕ್ಕದ್ದು. ಈ ವಿದ್ಯಾರ್ಹತೆ ಹೊರತುಪಡಿಸಿ ಇನ್ನಿತರ ಯಾವುದೇ ತತ್ಸಮಾನ ವಿದ್ಯಾರ್ಹತೆಗಳನ್ನು ಪರಿಗಣಿಸಲಾಗುವುದಿಲ್ಲ. ವಿದ್ಯಾರ್ಹತೆಯ ದಾಖಲಾತಿಗಳ ನೈಜತೆ ಬಗ್ಗೆ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ದೃಡಪಡಿಸಿಕೊಂಡ ನಂತರ ನೇಮಕಾತಿ ಆದೇಶ ನೀಡಲಾಗುವುದು.

ಆ) ಗಣಕಯಂತ್ರ ನಿರ್ವಹಣೆಯ ಪರಿಣಿತಿ ಹೊಂದಿರತಕ್ಕದ್ದು, ಸರ್ಕಾರದಿಂದ ಮಾನ್ಯತೆ ಪಡೆದ ಸಂಸ್ಥೆಯಿಂದ ಪ್ರಮಾಣ ಪತ್ರ ಪಡೆದಿರಬೇಕು.

1. ವಯೋಮಿತಿ:- ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕವಾದ 22-02-2019 ಕ್ಕೆ ಈ ಕೆಳಗಿನಂತೆ ವಯೋಮಿತಿ ಹೊಂದಿರತಕ್ಕದ್ದು.

| ಕ್ರ. ಸಂ | ವಿ ವ ರ | ಕನಿಷ್ಠ | ಗರಿಷ್ಠ |
|---|---|---|---|
| 1 | ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ/ಪ್ರ..ವರ್ಗ-1 | 18 | 40 |
| 2 | ಪ್ರ.ವರ್ಗ - 2ಎ. 2ಬಿ. 3ಎ. 3ಬಿ | 18 | 38 |
| 3 | ಸಾಮಾನ್ಯ ವರ್ಗದವರಿಗೆ | 18 | 35 |

| ವೇತನ ಶ್ರೇಣಿ | ರೂ.21400-500-22400-550-24600-600-27000-650-29600-750-32600-850-36000- 950-39800-1100-42000 |
|---|---|

ಎಸ್.ಎಸ್.ಎಲ್.ಸಿ. ಅಥವಾ ವರ್ಗಾವಣೆ ಪ್ರಮಾಣ ಪತ್ರ [ಟಿ.ಸಿ] ಅಥವಾ ಕ್ಯುಮುಲೇಟಿವ್ ರೆಕಾರ್ಡ್‌ನಲ್ಲಿ ನಮೂದಿಸಿರುವ ಜನ್ಮ ದಿನಾಂಕವನ್ನು ಆಯ್ಕೆ ಪ್ರಾಧಿಕಾರವು ಪರಿಗಣಿಸುತ್ತದೆ. ಇತರೆ ಯಾವುದೇ ದಾಖಲಾತಿಗಳನ್ನು ಪರಿಗಣಿಸಲಾಗುವುದಿಲ್ಲ. ಕರ್ನಾಟಕ ಸರ್ಕಾರಿ ಸೇವಾ [ಸಾಮಾನ್ಯ ನೇಮಕಾತಿ] 1977 ರ ನಿಯಮಾವಳಿಗಳ ನಿಯಮ 6 ರಂತೆ ವಯೋಮಿತಿಯನ್ನು ಅದರಲ್ಲಿ ತಿಳಿಸಿರುವ ಮಟ್ಟಿಗೆ ಸಂಬಂಧಪಟ್ಟ ದಾಖಲೆ ಒದಗಿಸಿದಲ್ಲಿ ಹೆಚ್ಚಿಸುವ ಬಗ್ಗೆ ಪರಿಶೀಲಿಸಲಾಗುವುದು.

ಕರ್ನಾಟಕ ಸರ್ಕಾರಿ ಸೇವಾ [ಸಾಮಾನ್ಯ ನೇಮಕಾತಿ] 1977 ರ ನಿಯಮಾವಳಿಗಳ ನಿಯಮ 6 ರಂತೆ ಗರಿಷ್ಠ ವಯೋಮಿತಿಯನ್ನು ಈ ಮುಂದಿನ ಪ್ರಕರಣಗಳಲ್ಲಿ ಮುಂದೆ ಹೇಳಿರುವಷ್ಟರಮಟ್ಟಿಗೆ ಹೆಚ್ಚಿಸಲು ಅವಕಾಶವಿದೆ.

[ಎ] ಸರ್ಕಾರ ಅಥವಾ ಸ್ಥಳೀಯ ಪ್ರಾಧಿಕಾರ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪಿಸಲಾದ ಅಥವಾ ರಾಜ್ಯ ಅಧಿನಿಯಮದ ಅಥವಾ ಕೇಂದ್ರ ಅಧಿನಿಯಮದ ಅಡಿಯಲ್ಲಿನ ಸರ್ಕಾರದಿಂದ ಸ್ಥಾಪಿತವಾಗಿದ್ದು, ಮತ್ತು ಸರ್ಕಾರವು ಒಡೆತನ ಹೊಂದಿರುವ ಅಥವಾ ನಿಯಂತ್ರಣ ಹೊಂದಿರುವ ನಿಗಮದ ಅಡಿಯಲ್ಲಿ ಹುದ್ದೆಯನ್ನು ಧಾರಣ ಮಾಡಿರುವ ಅಥವಾ ಧಾರಣ ಮಾಡಿದ್ದ ಅಭ್ಯರ್ಥಿಯ ಸಂದರ್ಭದಲ್ಲಿ ಆತ ಅಂಥ ಹುದ್ದೆಯನ್ನು ಧಾರಣೆ ಮಾಡಿರುವಷ್ಟು ಅಥವಾ ಧಾರಣೆ ಮಾಡಿದ್ದಷ್ಟು ಅಥವಾ [ಹತ್ತು] ವರ್ಷಗಳು ಇವುಗಳಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

| | |
|---|---|
| A | ಸರ್ಕಾರ ಅಥವಾ ಸ್ಥಳೀಯ ಪ್ರಾಧಿಕಾರ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪಿಸಲಾದ ಅಥವಾ ರಾಜ್ಯ ಅಧಿನಿಯಮದ ಅಥವಾ ಕೇಂದ್ರ ಅಧಿನಿಯಮದ ಅಡಿಯಲ್ಲಿನ ಸರ್ಕಾರದಿಂದ ಸ್ಥಾಪಿತವಾಗಿದ್ದು, ಮತ್ತು ಸರ್ಕಾರವು ಒಡೆತನ ಹೊಂದಿರುವ ಅಥವಾ ನಿಯಂತ್ರಣ ಹೊಂದಿರುವ ನಿಗಮದ ಅಡಿಯಲ್ಲಿ ಹುದ್ದೆಯನ್ನು ಧಾರಣ ಮಾಡಿರುವ ಅಥವಾ ಧಾರಣ ಮಾಡಿದ್ದ ಅಭ್ಯರ್ಥಿಯ ಸಂದರ್ಭದಲ್ಲಿ ಆತ ಅಂಥ ಹುದ್ದೆಯನ್ನು ಧಾರಣೆ ಮಾಡಿರುವಷ್ಟು ಅಥವಾ ಧಾರಣೆ ಮಾಡಿದ್ದಷ್ಟು ಅಥವಾ [ಹತ್ತು] ವರ್ಷಗಳು ಇವುಗಳಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು. |
| B | ಮಾಜಿ ಸೈನಿಕನಾಗಿರುವ ಅಭ್ಯರ್ಥಿಯ ಸಂದರ್ಭದಲ್ಲಿ ಮೂರು ವರ್ಷಗಳು ಮತ್ತು ಇದಕ್ಕೆ ಕೇಂದ್ರದ ಸಶಸ್ತ್ರ ಪಡೆಗಳಲ್ಲಿ ಅವನು ಸೇವೆ ಸಲ್ಲಿಸಿರುವಷ್ಟು ವರ್ಷಗಳನ್ನು ಸೇರಿಸಬೇಕು. |
| C | ಪೂರ್ಣಾವಧಿ ಕೆಡೆಟ್ ಇನ್‌ಸ್ಟ್ರಕ್ಟರ್ ಆಗಿ ಸೇವೆ ಸಲ್ಲಿಸಿದ ತರುವಾಯ, ರಾಷ್ಟ್ರೀಯ ಕೆಡೆಟ್ ದಳದಿಂದ ಬಿಡುಗಡೆ ಮಾಡಿದ ಅಭ್ಯರ್ಥಿಯ ಸಂದರ್ಭದಲ್ಲಿ, ಹಾಗೆ ಕೆಡೆಟ್ ಇನ್‌ಸ್ಟ್ರಕ್ಟರ್‌ರಾಗಿ ಆತನು ಸೇವೆ ಸಲ್ಲಿಸಿರುವಷ್ಟು ವರ್ಷಗಳು |
| D | ರಾಜ್ಯ ಸರ್ಕಾರ ಪ್ರಾಯೋಜಿತ ಗ್ರಾಮೀಣ ಕೈಗಾರೀಕರಣ ಯೋಜನೆಯಲ್ಲಿ ನೇಮಕಗೊಂಡ ಗ್ರಾಮ ಸಮೂಹ ಇನ್ಸ್‌ಪೆಕ್ಟರ ಆಗಿರುವ ಅಥವಾ ಆಗಿದ್ದಂಥ ಅಭ್ಯರ್ಥಿಯು ಸಂದರ್ಭದಲ್ಲಿ ಅಂಥ ಗ್ರಾಮ ಸಮೂಹ ಇನ್ಸ್‌ಪೆಕ್ಟರಾಗಿ ಆತ ಸೇವೆ ಸಲ್ಲಿಸಿರುವಷ್ಟು ವರ್ಷಗಳು. |
| E | ಅಂಗವಿಕಲನಾಗಿರುವ ಅಭ್ಯರ್ಥಿಯ ಸಂದರ್ಭದಲ್ಲಿ ಹತ್ತು ವರ್ಷಗಳು |
| F | ಈ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಹುದ್ದೆಯನ್ನು ಧಾರಣೆ ಮಾಡಿರುವ ಅಥವಾ ಧಾರಣ ಮಾಡಿದ್ದ ಅಭ್ಯರ್ಥಿಯ ಸಂದರ್ಭದಲ್ಲಿ ಅಂಥ ಹುದ್ದೆಯನ್ನು ಆತನು ಧಾರಣೆ ಮಾಡಿರುವಷ್ಟು ಅಥವಾ ಧಾರಣೆ ಮಾಡಿದ್ದಷ್ಟು ವರ್ಷಗಳು ಅಥವಾ ಐದು ವರ್ಷಗಳು ಇವುಗಳಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು. |
| G | ಅಭ್ಯರ್ಥಿ ವಿಧವೆಯಾಗಿರುವ ಸಂದರ್ಭದಲ್ಲಿ ಹತ್ತು ವರ್ಷಗಳು |
| H | ಜೀತ ಕಾರ್ಮಿಕನಾಗಿದ್ದ ಅಭ್ಯರ್ಥಿಯ ಸಂದರ್ಭದಲ್ಲಿ ಹತ್ತು ವರ್ಷಗಳು |

**7] ಹೈದ್ರಾಬಾದ-ಕರ್ನಾಟಕ ಪ್ರದೇಶ ಅಭ್ಯರ್ಥಿಗಳ ಮೀಸಲಾತಿ.**

1 ಹೈದ್ರಾಬಾದ–ಕರ್ನಾಟಕ ಪ್ರದೇಶಕ್ಕೆ ಒಳಪಡುವ ಕೊಪ್ಪಳ, ಬಳ್ಳಾರಿ, ರಾಯಚೂರು, ಯಾದಗಿರಿ, ಕಲಬುರಗಿ ಮತ್ತು ಬೀದರ ಜಿಲ್ಲೆಗಳ ಅಭ್ಯರ್ಥಿಗಳು ಹೈದ್ರಾಬಾದ–ಕರ್ನಾಟಕ ಪ್ರದೇಶಕ್ಕೆ ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಇಚ್ಛಿಸಿದ್ದಲ್ಲಿ, ಸಂವಿಧಾನದ ಅನುಚ್ಛೇದ 371(ಜೆ) ಅಡಿಯಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಕಂದಾಯ ಉಪ ವಿಭಾಗದ ಉಪವಿಭಾಗಾಧಿಕಾರಿಗಳು ನೀಡಿರುವ ಅರ್ಹತಾ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗಾಗಿ ಪಡೆದಿರತಕ್ಕದ್ದು.

2 ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಾಗ ಹೈದ್ರಾಬಾದ–ಕರ್ನಾಟಕ ಪ್ರದೇಶಕ್ಕೆ ಮೀಸಲಿರಿಸಿದ ಹುದ್ದೆಗೆ ಅಥವಾ ಮೀಸಲಿರಿಸಲಾರದ ಹುದ್ದೆಗೆ ಅರ್ಜಿ ಸಲ್ಲಿಸಿದ ಬಗ್ಗೆ ಕಡ್ಡಾಯವಾಗಿ ನಮೂದಿಸತಕ್ಕದ್ದು.

3) ಹೈದ್ರಾಬಾದ–ಕರ್ನಾಟಕ ಪ್ರದೇಶದವರಲ್ಲದ ಅಭ್ಯರ್ಥಿಗಳು ಹೈದ್ರಾಬಾದ–ಕರ್ನಾಟಕ ಪ್ರದೇಶಕ್ಕೆ ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ.

4) ಹೈದ್ರಾಬಾದ–ಕರ್ನಾಟಕ ಪ್ರದೇಶಕ್ಕೆ ಒಳಪಡುವ ಅಭ್ಯರ್ಥಿಗಳು ಹೈದ್ರಾಬಾದ–ಕರ್ನಾಟಕ ಪ್ರದೇಶಕ್ಕೆ ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸದೇ ಹೈದ್ರಾಬಾದ–ಕರ್ನಾಟಕ ಪ್ರದೇಶದವರಿಗೆ ಹೊರತುಪಡಿಸಿ ಬೇರೆ ಪ್ರದೇಶಕ್ಕೆ ಮೀಸಲಿರಿಸಿದ ಹುದ್ದೆಗೆ ಅರ್ಜಿ ಸಲ್ಲಿಸಿ ತದನಂತರ ಹೈದ್ರಾಬಾದ–ಕರ್ನಾಟಕ ಪ್ರದೇಶಕ್ಕೆ ಮೀಸಲಾತಿ ಕೋರಿದ್ದಲ್ಲಿ ಅಂತಹ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

5) ಹೈದ್ರಾಬಾದ–ಕರ್ನಾಟಕ ಪ್ರದೇಶಕ್ಕೆ ಮೀಸಲಿರಿಸಿದ ಹುದ್ದೆಗಳ ಅಡಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳಿಗೆ ಅರ್ಹತಾ ಪ್ರಮಾಣ ಪತ್ರದ ಬಗ್ಗೆ ಜಿಲ್ಲಾಧಿಕಾರಿ, [ಅಧ್ಯಕ್ಷರು, ಹೈದ್ರಾಬಾದ ಕರ್ನಾಟಕ ಅರ್ಹತಾ ಪ್ರಮಾಣ ಪತ್ರ ಪರಿಶೀಲನಾ ಸಮಿತಿ] ರವರಿಂದ ಸಿಂಧುತ್ವ ಪ್ರಮಾಣಪತ್ರ ಪಡೆದ ನಂತರ ನೇಮಕಾತಿ ಆದೇಶ ನೀಡಲಾಗುವುದು.

6) ಅಭ್ಯರ್ಥಿಗಳು Online ಮುಖಾಂತರ ಅರ್ಜಿಯನ್ನು ಸಲ್ಲಿಸುವ ಸಮಯದಲ್ಲಿ **371 (ಜೆ) ಸ್ಥಳೀಯ** ವೃಂದ ಎಂದು ಆಯ್ಕೆ ಮಾಡಿದ ಅಭ್ಯರ್ಥಿಗಳನ್ನು 371 (ಜೆ) ಸ್ಥಳೀಯ ವೃಂದದಡಿಯಲ್ಲಿ ಮಾತ್ರ ಆಯ್ಕೆ ಮಾಡಲಾಗುವುದು ಹಾಗೂ **ಸ್ಥಳಿಯೇತರ (ಉಳಿದ ಮೂಲ ವೃಂದ) 371 (ಜೆ)** ಆಯ್ಕೆ ಮಾಡಿದ ಅಭ್ಯರ್ಥಿಗಳನ್ನು **Non HK 371 (ಜೆ)** ಅಡಿಯಲ್ಲಿ ಮಾತ್ರ ಆಯ್ಕೆ ಮಾಡಲಾಗುವುದು.

7) **371 (ಜೆ) ಸ್ಥಳೀಯ ವೃಂದದಡಿಯಲ್ಲಿ** ಬರುವಂತಹ (6) ಜಿಲ್ಲೆಯ ಸ್ಥಳೀಯ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಬಹುದು.

8) **Non HK 371 (ಜೆ)** ಅಡಿಯಲ್ಲಿ ಸಲ್ಲಿಸುವ ಅರ್ಜಿಗಳನ್ನು ರಾಜ್ಯದ ಎಲ್ಲಾ ಜಿಲ್ಲೆಗಳಿಗೆ ಅನ್ವಯವಾಗಿದ್ದು, 371 (ಜೆ) ವೃಂದದಡಿಯಲ್ಲಿ ಬರುವಂತಹ 6 ಜಿಲ್ಲೆಯ ಅಭ್ಯರ್ಥಿಗಳು ಸಹ ಆಯ್ಕೆಗೆ ಅರ್ಜಿ ಸಲ್ಲಿಸಬಹುದು.

**8] ಜಾತಿ ಮೀಸಲಾತಿ ಪ್ರಮಾಣ ಪತ್ರಗಳು-; ಜಾತಿ ಮೀಸಲಾತಿ ಕೋರಬಯಸುವ ಅಭ್ಯರ್ಥಿಗಳು ತಹಶೀಲ್ದಾರ್ ಹುದ್ದೆಗಿಂತ ಕಡಿಮೆ ಇಲ್ಲದ ಅಧಿಕಾರಿಗಳಿಂದ ಪ್ರಮಾಣ ಪತ್ರಗಳನ್ನು ಪಡೆದಿರತಕ್ಕದ್ದು.**

1.ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಅಭ್ಯರ್ಥಿಗಳು ನಮೂನೆ - ಡಿ ರಲ್ಲಿ [ ಅನುಭಂದ-1]

2.ಪ್ರ.ವರ್ಗ-1 ರ ಅಭ್ಯರ್ಥಿಗಳು ನಮೂನೆ 'ಇ' ನಲ್ಲಿ [ ಅನುಬಂಧ-2]

3.ಪ್ರ.ವರ್ಗ-2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳು ನಮೂನೆ ' ಎಫ್ ' ನಲ್ಲಿ [ಅನುಬಂಧ-3]ಈ ಪ್ರಮಾಣ ಪತ್ರಗಳು ಈ ಹುದ್ದೆಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ: 21-02-2019 ರ ಒಳಗೆ ಅರ್ಹತೆಯನ್ನು ಪಡೆದಿರಬೇಕು.

4.ಜಾತಿ ಮೀಸಲಾತಿ ಅಡಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳಿಗೆ ಜಾತಿ ಪ್ರಮಾಣ ಪತ್ರದ ಬಗ್ಗೆ ಜಿಲ್ಲಾಧಿಕಾರಿ, [ಅಧ್ಯಕ್ಷರು, ಜಾತಿ ಆದಾಯ ಪರಿಶೀಲನಾ ಸಮಿತಿ] ರವರಿಂದ ಸಿಂಧುತ್ವ ಪ್ರಮಾಣಪತ್ರ ಪಡೆದ ನಂತರ ನೇಮಕಾತಿ ಆದೇಶ ನೀಡಲಾಗುವುದು.

**9] ಗ್ರಾಮೀಣ ಅಭ್ಯರ್ಥಿ:-**

1}. ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ ಗ್ರಾಮೀಣ ಮೀಸಲಾತಿಗೆ . ಒಳಪಡುವ ಪ್ರದೇಶಗಳಲ್ಲಿ 1 ರಿಂದ 10 ನೇ ತರಗತಿಯವರೆಗೆ ವ್ಯಾಸಂಗ ಮಾಡಿ ಉತ್ತೀರ್ಣರಾಗಿರಬೇಕು

2} ಗ್ರಾಮೀಣ ಮೀಸಲಾತಿಯನ್ನು ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರ.ವರ್ಗ-1, 2ಎ, 2ಬಿ, 3ಎ, 3ಬಿ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳು ನಮೂನೆ-2 ರಲ್ಲಿ ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು.

3}. ಗ್ರಾಮೀಣ ಮೀಸಲಾತಿ ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ನಮೂನೆ-2ರ ಮೀಸಲಾತಿ ಪ್ರಮಾಣ ಪತ್ರದ ಜೊತೆಗೆ ನಮೂನೆ-1 ರಲ್ಲಿ ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ತಹಶೀಲ್ದಾರರಿಂದ ಪಡೆದಿಟ್ಟುಕೊಂಡಿರತಕ್ಕದ್ದು. [ಅನುಬಂಧ-4 ನಮೂನೆ-1 ಮತ್ತು 2]

**[ಸೂಚನೆ:-** ಗ್ರಾಮೀಣ ಮೀಸಲಾತಿಗೆ ಸಂಬಂಧಿಸಿದಂತೆ ನಮೂನೆ-2 ರಲ್ಲಿಯ ಪ್ರಮಾಣ ಪತ್ರವನ್ನು ಅಭ್ಯರ್ಥಿಗಳು ತಾವು ವ್ಯಾಸಂಗ ಮಾಡಿದ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಮೊಹರಿನೊಂದಿಗೆ ಪ್ರಮಾಣ ಪತ್ರವನ್ನು ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಪಡಿದಿರತಕ್ಕದ್ದು.]

10]. ಕನ್ನಡ ಮಾಧ್ಯಮ ಅಭ್ಯರ್ಥಿ:-

ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು 1ನೇ ತರಗತಿಯಿಂದ 10 ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಮೊಹರಿನೊಂದಿಗೆ ಪ್ರಮಾಣ ಪತ್ರವನ್ನು ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಪಡಿದಿರತಕ್ಕದ್ದು [ ಅನುಬಂಧ-5]

11] .ಯೋಜನಾ ನಿರಾಶ್ರಿತ ಅಭ್ಯರ್ಥಿ:

ಯೋಜನೆಗಳಿಂದ ನಿರ್ವಸಿತರಾದ ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳನ್ನು ಕೋರುವ ಅಭ್ಯರ್ಥಿಗಳು ಸಂಬಂಧಿಸಿದ ತಹಶೀಲ್ದಾರ್ ರವರಿಂದ ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ಪಡೆದುಕೊಂಡಿರತಕ್ಕದ್ದು. [ಅನುಬಂಧ-6]

12] . ಅಂಗವಿಕಲರ ಮೀಸಲಾತಿ ಬಗ್ಗೆ:

ಕರ್ನಾಟಕ ನಾಗರೀಕ ಸೇವಾ [ಸಾಮಾನ್ಯ ನೇಮಕಾತಿ] ನಿಯಮಗಳು 1977 ರ ನಿಯಮ 9 [1-ಎ] ರ ಅನ್ವಯ ರಾಜ್ಯ ಸಿವಿಲ್ ಸೇವೆಯಲ್ಲಿನ ಗ್ರೂಪ್-ಸಿ ಹುದ್ದೆಗಳ ನೇರ ನೇಮಕಾತಿಯಲ್ಲಿ ಅಂಗವಿಕಲರಿಗೆ ಶೇಕಡಾ 5 ರಷ್ಟು ಸಮತಳ ಮೀಸಲಾತಿ ಕಲ್ಪಿಸಲಾಗಿದೆ. ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ/12/ಸೆನೆನಿ/2006 ದಿನಾಂಕ:1.8.2009 ರಂತೆ ಮೀಸಲಾತಿ ನೀಡಲಾಗುವುದು. ಸರ್ಕಾರದ ಅಧಿಸೂಚನೆ ಸಂಖ್ಯೆ:ಡಿಪಿಎಆರ್/52/ಎಸ್.ಎಸ್.ಆರ್/99 ದಿನಾಂಕ:29-11-2002 ಮತ್ತು ಸರಕಾರದ ಅಧಿಸೂಚನೆ ಸಂಖ್ಯೆ/ಡಿಪಿಎಆರ್/54/ಎಸ್‌ಆರ್‌ಪಿ/2012 ದಿನಾಂಕ 23/06/2012 ರೀತ್ಯಾ ಗ್ರಾಮಲೆಕ್ಕಿಗರ ಹುದ್ದೆಗಳಲ್ಲಿ ಅಂಗವಿಕಲರ ಮೀಸಲಾತಿಯನ್ನು ಈ ಕೆಳಕಂಡ ವರ್ಗಗಳಿಗೆ ಮಾತ್ರ ಕಲ್ಪಿಸಲಾಗಿದೆ.

1. ಕುಷ್ಟ ರೋಗದಿಂದ ಗುಣಮುಖರಾದವರು [ Leprosy cured]
2. ಶ್ರವಣ ದೋಷವುಳ್ಳವರು [Hearing impaired]
3. ಮಾನಸಿಕ ಅಸ್ವಸ್ಥತೆ [Mentally ill ]
4. ದೈಹಿಕ ಅಂಗವಿಕಲತೆ ಉಳ್ಳವರು [Locomotor Disability]

ಈ ಮೇಲಿನ ಅಂಗವಿಕಲರು ಹೊರತುಪಡಿಸಿ ಇತರ ದೈಹಿಕ ಅಂಗವಿಕಲತೆಯುಳ್ಳ ಅಭ್ಯರ್ಥಿಗಳು ಗ್ರಾಮಲೆಕ್ಕಿಗರ ಹುದ್ದೆಗೆ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ.

ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ:ಸಿಆಸುಇ/128/ಸೆನೆನಿ/2005 ದಿನಾಂಕ:19/11/2005 ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಸಂಬಂಧಪಟ್ಟ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯು ನೀಡುವ ಪ್ರಮಾಣ ಪತ್ರವನ್ನು ಪಡೆದುಕೊಂಡಿರತಕ್ಕದ್ದು. ಬೇರೆ ಯಾವುದೇ ನಮೂನೆಗಳಲ್ಲಿ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು ಪರಿಗಣಿಸಲು ಬರುವುದಿಲ್ಲ.

[ಸೂಚನೆ:- ಈ ಮೇಲ್ಕಾಣಿಸಿದ ಪ್ರಮಾಣ ಪತ್ರಗಳನ್ನು ಮಾನ್ಯ ಸರ್ಕಾರ ನಿಗದಿಪಡಿಸಿದ ನಮೂನೆಗಳಲ್ಲಿಯೇ ಅಭ್ಯರ್ಥಿಗಳು ನಿಗದಿತ ದಿನಾಂಕ: 22-02-2019 ರೊಳಗಾಗಿ ಹೊಂದಿರತಕ್ಕದ್ದು, ಹಾಗೂ ಮೆರಿಟ್ ಆಧಾರದ ಮೇಲೆ ತಾತ್ಕಾಲಿಕ ಆಯ್ಕೆಯ ಪರಿಶೀಲನಾ ಪಟ್ಟಿಯಲ್ಲಿ ಪ್ರಕಟಗೊಂಡ ಅಭ್ಯರ್ಥಿಗಳು ಮಾತ್ರ ನಿಗದಿತ ದಿನಾಂಕ:27-02-2019 ರಂದು ಪೂರ್ವಾಹ್ನ 11-00 ಗಂಟೆಗೆ ನೇಮಕಾತಿ ಪ್ರಾಧಿಕಾರದ ಎದುರು [ರಾಯಚೂರು ಜಿಲ್ಲಾಧಿಕಾರಿಗಳ ಕಾರ್ಯಾಲಯದಲ್ಲಿ] ಮೂಲ ಪ್ರಮಾಣ ಪತ್ರಗಳನ್ನು ತಪ್ಪದೆ ಹಾಜರಪಡಿಸತಕ್ಕದ್ದು. ಮೂಲ ಪ್ರಮಾಣ ಪತ್ರಗಳನ್ನು ಹಾಜರುಪಡಿಸದಿರುವ ಅಭ್ಯರ್ಥಿಗಳ ಅರ್ಜಿಯನ್ನು ಯಾವುದೇ ಸೂಚನೆ ನೀಡದೇ ತಿರಸ್ಕೃತಗೊಳಿಸಲಾಗುವುದು.]

13] ಆಯ್ಕೆ ವಿಧಾನ:-

ಕರ್ನಾಟಕ ಜನರಲ್ ಸರ್ವೀಸಸ್ [Revenue Subordinate Branch] [Cadre & Recruitment] [ತಿದ್ದುಪಡಿ] ನಿಯಮಗಳು 2008 ಮತ್ತು 2009 ಹಾಗೂ ಕರ್ನಾಟಕ ನಾಗರೀಕ ಸೇವಾ [ಸಾಮಾನ್ಯ ನೇಮಕಾತಿ] ನಿಯಮಗಳು 1977 ರ ಪ್ರಕಾರ ಅಭ್ಯರ್ಥಿಯನ್ನು ಅವರು ಪಿ.ಯು.ಸಿ. ಪರೀಕ್ಷೆ ಅಥವಾ CBSE ಅಥವಾ ICSE ನಡೆಸುವ 12 ನೇ ತರಗತಿ ಪರೀಕ್ಷೆಯಲ್ಲಿ ಪಡೆದ ಅಂಕಗಳ [ On merit ] ಆಧಾರದ ಮೇಲೆ ಆಯಾ ಮೀಸಲಾತಿ ಪ್ರವರ್ಗಕ್ಕೆ ಸಂಬಂಧಿಸಿದಂತೆ ಆಯ್ಕೆ ಮಾಡಲಾಗುವುದು. ನಿಯಮಾವಳಿಯಂತೆ ಪರಿಶೀಲನಾ ಪಟ್ಟಿಯನ್ನು ದಿನಾಂಕ: 25-02-2019 ರಂದು ಪ್ರಕಟಿಸಲಾಗುವುದು.

14] ಪ್ರಮುಖ ಸೂಚನೆಗಳು:-

ಈ ಕೆಳಕಂಡ ಮೂಲ ಪ್ರಮಾಣ ಪತ್ರಗಳನ್ನು ನಿಗದಿಪಡಿಸಿದ ದಿನಾಂಕ: 27-02-2019 ಪರಿಶೀಲನೆಗೆ ಹಾಜರು ಪಡಿಸತಕ್ಕದ್ದು

| | |
|---|---|
| ಅ | ಪಿ.ಯು.ಸಿ. ಪರೀಕ್ಷೆ ಅಥವಾ CBSE ಅಥವಾ ICSE ನಡೆಸುವ 12 ನೇ ತರಗತಿ ಪರೀಕ್ಷೆಯ ಅಂಕ ಪಟ್ಟಿ ಪ್ರಮಾಣ ಪತ್ರ |
| ಆ | ಹುಟ್ಟಿದ ದಿನಾಂಕದ ಪ್ರಮಾಣ ಪತ್ರ [ಎಸ್.ಎಸ್.ಎಲ್.ಸಿ/ಟಿ.ಸಿ. ಅಥವಾ ಕ್ಯುಮುಲೇಟಿವ್‌ರೆಕಾರ್ಡ] |
| ಇ | ಸೇವೆಯಲ್ಲಿರುವ ಅಭ್ಯರ್ಥಿಗಳು ಅವರು ಸೇವೆಯಲ್ಲಿ ಇರುವ ಬಗ್ಗೆ ಸೇವಾ ಪ್ರಮಾಣ ಪತ್ರ ಮತ್ತು ಸದರಿ ಹುದ್ದೆಗೆ ಅರ್ಜಿ ಸಲ್ಲಿಸುವ ಬಗ್ಗೆ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು [ No Objection Certificate] ಸಂಬಂಧಿಸಿದ ನೇಮಕಾತಿ ಪ್ರಾಧಿಕಾರದಿಂದ ಪಡೆದಿಟ್ಟುಕೊಂಡಿರಬೇಕು .[ಅನುಬಂಧ-7] |
| ಈ | ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ [ಅನುಬಂಧ-1 ನಮೂನೆ 'ಡಿ '] ಮತ್ತು ಪ್ರ.ವರ್ಗ-1 [ಅನುಬಂಧ-2 ನಮೂನೆ 'ಇ'] ಹಾಗೂ ಪ್ರ ವರ್ಗ-2ಎ, 2ಬಿ, 3ಎ, 3ಬಿ [ ಅನುಬಂಧ-3 ನಮೂನೆ- ಎಫ್ ಮೀಸಲಾತಿ ಅಭ್ಯರ್ಥಿಗಳು ಕ್ರಮವಾಗಿ ನಮೂನೆ ಡಿ/ಇ/ಎಫ್ ನಲ್ಲಿ ತಹಶೀಲ್ದಾರ್ ರವರಿಂದ ಪಡೆದ ಪ್ರಮಾಣ ಪತ್ರಗಳನ್ನು ಪಡೆದಿಟ್ಟುಕೊಂಡಿರತಕ್ಕದ್ದು |
| ಉ | ಯೋಜನಾ ನಿರಾಶ್ರಿತ ಕುಟುಂಬದ ಅಭ್ಯರ್ಥಿಗಳು, ವಿಧವೆಯರು, ಜೀತ ಕಾರ್ಮಿಕರು, ಇವರುಗಳು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ. |
| ಊ | ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ |
| ಋ | ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ |
| ೠ | ಸೈನಿಕ ಸೇವೆಯಿಂದ ಬಿಡುಗಡೆಯಾದ /ಮುಕ್ತಿಹೊಂದಿದ ಬಗೆಗಿನ ಪ್ರಮಾಣ ಪತ್ರ. |

15] ಸಾಮಾನ್ಯ ಸೂಚನೆಗಳು:-

| | |
|---|---|
| 1 | ನೈತಿಕ ದುರ್ನಡತೆಯಿಂದಾಗಿ/ನೀತಿ ಬಾಹಿರ ಚಟುವಟಿಕೆಗಳಿಂದಾಗಿ ನ್ಯಾಯಾಲಯದಿಂದ ಶಿಕ್ಷೆಗೊಳಪಟ್ಟಿರುವ ವ್ಯಕ್ತಿ ಅಥವಾ ರಾಜ್ಯ/ಕೇಂದ್ರ/ಸ್ಥಳೀಯ ಸಂಸ್ಥೆ ಕಛೇರಿಗಳಲ್ಲಿ ನೈತಿಕ ದುರ್ನಡತೆಯಿಂದಾಗಿ ಅಥವಾ ನೀತಿ ಬಾಹಿರ ಚಟುವಟಿಕೆಗಳಲ್ಲಿ ಒಳಗಾಗಿ ಅಥವಾ ಆಯ್ಕೆಯಾದ ಅಭ್ಯರ್ಥಿಯು ಬದಲಿಯಾಗಿ ಕಾರ್ಯ ನಿರ್ವಹಿಸುತ್ತಿದ್ದ ಸಂದರ್ಭದಲ್ಲಿ ಕಾನೂನು ಬಾಹಿರ/ನೀತಿ ಬಾಹಿರ ಚಟುವಟಿಕೆಗಳಲ್ಲಿ ತೊಡಗಿ ಸೇವೆಯಿಂದ ತೆಗೆದುಹಾಕಿದ್ದಲ್ಲಿ/ವಜಾ ಮಾಡಲ್ಪಟ್ಟಿದ್ದು ಕಂಡುಬಂದಲ್ಲಿ ನೇಮಕಾತಿಗೆ ಅನರ್ಹರಾಗಿರುತ್ತಾರೆ. |

| | |
|---|---|
| 2 | ಅರ್ಜಿಯಲ್ಲಿ ತಪ್ಪು/ಸುಳ್ಳು ಮಾಹಿತಿ ನೀಡಿ ಉದ್ಯೋಗ ಪಡೆಯುವ ಅಭ್ಯರ್ಥಿಗಳನ್ನು ಯಾವುದೇ ಸಮಯದಲ್ಲಾದರೂ ವಜಾ ಮಾಡಲಾಗುತ್ತದೆ ಹಾಗೂ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು |
| 3 | ಅರ್ಜಿಯಲ್ಲಿ ನೀಡುವ ವಿಳಾಸವೇ ಅಂತಿಮವಾಗಿದ್ದು ಎಲ್ಲಾ ಪತ್ರ ವ್ಯವಹಾರಗಳನ್ನು ಅದೇ ವಿಳಾಸಕ್ಕೆ ಕಳುಹಿಸಿಕೊಡಲಾಗುವುದು. ನಂತರದಲ್ಲಿ ವಿಳಾಸ ಬದಲಾವಣೆ ಬಗ್ಗೆ ಯಾವುದೇ ಪತ್ರ ವ್ಯವಹಾರವನ್ನು ಪರಿಗಣಿಸಲಾಗುವುದಿಲ್ಲ |
| 4 | ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಖಡ್ಡಾಯವಾಗಿ **e-mail ID** ಯನ್ನು ನಮೂದಿಸತಕ್ಕದ್ದು |
| 5 | ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳಿಗೆ ದಿನಾಂಕ;27-2-2019 ರಂದು ಜಿಲ್ಲಾಧಿಕಾರಿಗಳ ಕಾರ್ಯಾಲಯದಲ್ಲಿ ಅಪರಾಹ್ನ 11-00 ಗಂಟೆಗೆ ಅಗತ್ಯ ದಾಖಲಾತಿಗಳೊಂದಿಗೆ ಹಾಜರಾಗಲು ಸೂಚಿಸಿ **e-mail ID** ಮುಖಾಂತರ ಸಂದೇಶ ರವಾನಿಸಲಾಗುವುದು. |
| 6 | ಅರ್ಹ ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವ ಮುನ್ನ ಆನ್ ಲೈನ್ ಮುಖಾಂತರ ವೆಬ್ ಸೈಟ್ ನಲ್ಲಿ ಲಭ್ಯವಿರುವ ಸೂಚನೆಗಳನ್ನು ಪಾಲಿಸಬೇಕು |
| 7 | ಅಭ್ಯರ್ಥಿಗಳ ಅರ್ಹತೆಯ ವಿಷಯದಲ್ಲಿ ಆಯ್ಕೆ ಪ್ರಾಧಿಕಾರದ ನಿರ್ಧಾರವೇ ಅಂತಿಮವಾಗಿರುತ್ತದೆ |
| 8 | ಅಭ್ಯರ್ಥಿಯ ಹೆಸರು ಅಂತಿಮ ಆಯ್ಕೆ ಪಟ್ಟಿಯಲ್ಲಿ ಬಂದಿದೆ ಎಂಬುದರ ಆಧಾರದ ಮೇಲೆ ಅಭ್ಯರ್ಥಿಗೆ ನೇಮಕಾತಿಯ ಯಾವುದೇ ಹಕ್ಕು ದೊರೆಯುವುದಿಲ್ಲ. |
| 9 | ಆಯ್ಕೆ ಸಂಬಂಧವಾಗಿ ಈ ಕಛೇರಿಯೊಂದಿಗೆ ಯಾವುದೆ ಪತ್ರ ವ್ಯವಹಾರಕ್ಕೆ ಆಸ್ಪದವಿರುವುದಿಲ್ಲ |
| 10 | ಅರ್ಜಿ ತುಂಬುವ ವಿಧಾನ ಹಾಗೂ ಹೆಚ್ಚಿನ ವಿವರಗಳು ಜಿಲ್ಲಾಧಿಕಾರಿಗಳು ರಾಯಚೂರು ಕಛೇರಿಯ ಅಧಿಕೃತ ವೆಬ್ ಸೈಟ್. http://raichur-va.kar.nic.in ರಲ್ಲಿನ ಮಾಹಿತಿ ಸೂಚಿಯಲ್ಲಿ ಲಭ್ಯವಿರುತ್ತದೆ ಮತ್ತು ಸ್ಪಷ್ಟೀಕರಣ ಅಗತ್ಯವಿದ್ದಲ್ಲಿ ಸಹಾಯವಾಣಿ ಸಂಖ್ಯೆ: 08532-226383 ರಲ್ಲಿ ಕಛೇರಿ ಕೆಲಸದ ವೇಳೆಯಲ್ಲಿ ಸಂಪರ್ಕಿಸಬಹುದು. |

**ಷರತ್ತು**: - ಆಯ್ಕೆಗೊಳ್ಳುವ ಅಭ್ಯರ್ಥಿಗಳು ಕನಿಷ್ಠ 5 ವರ್ಷಗಳವರೆಗೆ ಕಡ್ಡಾಯವಾಗಿ ಈ ಜಿಲ್ಲೆಯಲ್ಲಿಯೇ ಸೇವೆ ಸಲ್ಲಿಸತಕ್ಕದ್ದು

(ಶರತ್ .ಬಿ) ಭಾ.ಆ.ಸೇ

ಅಧ್ಯಕ್ಷರು

ಗ್ರಾಮಲೆಕ್ಕಿಗರ ನೇರ ನೇಮಕಾತಿ

ಆಯ್ಕೆ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿಗಳು

ರಾಯಚೂರು

ಸಂಕಲನಾಧಿಕಾರಿ, ಸರಕಾರಿ ಹೊರವಲಯ ಮುದ್ರಣಾಲಯ, ಆರ್.ವಿ.ಕಾಲೇಜು ಅಂಚೆ, 8ನೇ ಮೇನ್, ಮೈಸೂರು ರಸ್ತೆ, ಕೆಂಗೇರಿ ಬೆಂಗಳೂರು-560059 ಇವರಿಗೆ ಕಳುಹಿಸುತ್ತಾ ಈ ಅಧಿಸೂಚನೆಯನ್ನು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಹಾಗೂ ಅದರ 100 ಪ್ರತಿಗಳನ್ನು ಜಿಲ್ಲಾಧಿಕಾರಿಗಳು ರಾಯಚೂರು ಇವರಿಗೆ ಒದಗಿಸಲು ಕೋರಲಾಗಿದೆ.

ಪ್ರತಿಯನ್ನು:-

1) ಮಾನ್ಯ ಮುಖ್ಯ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಬೆಂಗಳೂರು.

2) ಮಾನ್ಯ ಸರಕಾರದ ಪ್ರಧಾನ ಕಾರ್ಯದರ್ಶಿಗಳು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಹೈದ್ರಾಬಾದ- ಕರ್ನಾಟಕ ವಿಶೇಷ ಕೋಶ) ವಿಧಾನಸೌಧ ಬೆಂಗಳೂರು

3) ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಕಂದಾಯ ಇಲಾಖೆ [ಸೇವೆಗಳು] ಬಹುಮಹಡಿಗಳ ಕಟ್ಟಡ ಬೆಂಗಳೂರು.

4) ಮಾನ್ಯ ಪ್ರಾದೇಶಿಕ ಆಯುಕ್ತರು ಕಲಬುರಗಿ ವಿಭಾಗ ಕಲಬುರಗಿ

5) ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಕಳುಹಿಸುತ್ತಾ ತಮ್ಮ ಕಾರ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.

6) ಜಿಲ್ಲಾ ಪೋಲಿಸ್ ಅಧೀಕ್ಷಕರು, ರಾಯಚೂರು.

7) ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿಗಳು ರಾಯಚೂರು

8) ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆ ರಾಯಚೂರು

9) ಸಹಾಯಕ ಆಯುಕ್ತರು ರಾಯಚೂರು ಮತ್ತು ಲಿಂಗಸೂಗೂರು ಇವರಿಗೆ ಕಳುಹಿಸುತ್ತಾ ತಮ್ಮ ಕಾರ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.

10) ತಹಶೀಲ್ದಾರ್ ರಾಯಚೂರು/ಮಾನವಿ/ದೇವದುರ್ಗ/ಲಿಂಗಸೂಗೂರು/ಮಸ್ಕಿ/ಸಿರವಾರ ಮತ್ತು ಸಿಂಧನೂರು ಇವರಿಗೆ ಕಳುಹಿಸುತ್ತಾ ತಮ್ಮ ಕಾರ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.

11) ಈ ಕಾರ್ಯಾಲಯದ ಸೂಚನಾ ಫಲಕಕ್ಕೆ/ಹೆಚ್ಚುವರಿ ಪ್ರತಿಗಳು ಶಾಖಾ ಕಡತಕ್ಕೆ.

## ಜಿಲ್ಲಾಧಿಕಾರಿಗಳ ಕಾರ್ಯಾಲಯ ರಾಯಚೂರು

### ಅನುಬಂಧ

ಸರಕಾರದ ಅಧಿಕೃತ ಜ್ಞಾಪನ ಪತ್ರ ಸಂಖ್ಯೆ/ಸಿಆಸುಇ/33/ಹೈಕಅು/2014 ದಿನಾಂಕ 10/04/2014ರನ್ವಯ ಭಾರತ ಸಂವಿಧಾನದ 371(ಜೆ) ಅನುಚ್ಛೇದದನ್ವಯ ಸ್ಥಳೀಯ ವೃಂದ ಮತ್ತು ಉಳಿಕೆ ಮೂಲ ವೃಂದದಲ್ಲಿ ರೋಸ್ಟರ್ ಬಿಂದುಗಳನ್ನು ಸರಿದೂಗಿಸಿ ಚಾಲನೆಗೊಳಿಸಲಾಗಿದೆ.

ವಿವರ ಈ ಕೆಳಗಿನಂತಿದೆ ಹುದ್ದೆಗಳ ವರ್ಗೀಕರಣ [2019 ನೇ ಸಾಲಿನಲ್ಲಿ ಖಾಲಿ ಇರುವ ಹುದ್ದೆಗಳು 41(HK)+10(Non -HK)=51]

ಸ್ಥಳೀಯ ವೃಂದದಲ್ಲಿ ಹುದ್ದೆಗಳ ವರ್ಗೀಕರಣ ಒಟ್ಟು (41) ಹುದ್ದೆಗಳು ಆಯಾ ವರ್ಗಗಳಿಗನುಗುಣವಾಗಿ

| ಪ್ರ ವರ್ಗ | ಹುದ್ದೆಗಳು | ಸಾಮಾನ್ಯ | ಕನ್ನಡ ಮಾಧ್ಯಮ | ಮಹಿಳಾ ಅಭ್ಯರ್ಥಿ | ಯೋಜನಾ ನಿರಾಶ್ರಿತ | ಗ್ರಾಮೀಣ ಅಭ್ಯರ್ಥಿ | ಮಾಜಿ ಸೈನಿಕ | ಅಂಗವಿಕಲ ಅಭ್ಯರ್ಥಿ | ಒಟ್ಟು |
|---|---|---|---|---|---|---|---|---|---|
| | | ( O) | [KM] | W | (PDP) | (R) | (XMP) | (PH) | |
| ಪರಿಶಿಷ್ಟಜಾತಿ | 7 | 2 | 0 | 2 | 0 | 2 | 0 | 1 | 7 |
| ಪರಿಶಿಷ್ಟಪಂಗಡ | 2 | 1 | 0 | 1 | 0 | 0 | 0 | 0 | 2 |
| ಪ್ರ ವರ್ಗ I | 2 | 1 | 0 | 1 | 0 | 0 | 0 | 0 | 2 |
| ಪ್ರ ವರ್ಗ II A | 6 | 1 | O | 2 | 0 | 2 | 0 | 1 | 6 |
| ಪ್ರ ವರ್ಗ IIB | 2 | 1 | 0 | 1 | 0 | 0 | 0 | 0 | 2 |
| ಪ್ರ ವರ್ಗ III A | 1 | 1 | 0 | 0 | 0 | 0 | 0 | 0 | 1 |
| ಪ್ರ ವರ್ಗ IIIB | 1 | 1 | | 0 | 0 | 0 | 0 | 0 | 1 |
| ಸಾಮಾನ್ಯ ವರ್ಗ | 20 | 4 | 1 | 6 | 1 | 5 | 2 | 1 | 20 |
| Total | **41** | 12 | 1 | 13 | 1 | 9 | 2 | 3 | **41** |